<u>ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ</u>
<u>ದಂಡಾಧಿಕಾರಿಗಳ ನ್ಯಾಯಾಲಯ, ಕಡೂರು.</u>
<u>ಸಿ.ಸಿ.ಸಂಖ್ಯೆ 2227 /2023</u>

ಫಿರ್ಯಾದುದಾರರುಃ- ಸರ್ಕಾರದ ಪರವಾಗಿ ಕಡೂರು ಪೊಲೀಸರು

ವಿರುದ್ಧ

ಆರೋಪಿತರುಃ- ಅರುಣ್ ಕುಮಾರ್

**<u>ದೋಷಾರೋಪಣೆ</u>**

ಶ್ರೀ ಎಂ.ಎನ್.ರಾಮ್ ಪ್ರಶಾಂತ್, ಬಿ.ಎ.ಎಲ್. ಎಲ್.ಎಲ್.ಬಿ, ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ಕಡೂರು ಆದ ನಾನು ಈ ಕೆಳಗೆ ಕಾಣಿಸಿರುವಃ

ಅರುಣ್ ಕುಮಾರ ಬಿನ್ ಹನುಮಂತಪ್ಪ, ವಯಸ್ಸುಃ 26 ವರ್ಷ,
ಬಾರ್ ಬೆಡಿಂಗ್ ಕೆಲಸ, ವಾಸ ಃ ಅಂಬೇಡ್ಕರ್ ನಗರ, ಕಡೂರು ಟೌನ್.

ಆದ ನಿಮ್ಮ ವಿರುದ್ಧ ಈ ಕೆಳಗಿನಂತೆ ಹೊರಿಸಿರುವ ದೋಷಾರೋಪಣೆ ಏನೆಂದರೆಃ

ದಿನಾಂಕ 18.10.2022 ರಂದು ಸಂಜೆ 6-00 ಗಂಟೆ ಸಮಯದಲ್ಲಿ, ಚಾಸಾ-1 ಪ್ರಸನ್ನಕುಮಾರ ರವರು ಸುಮಾರು 8-10 ದಿನಗಳ ಹಿಂದೆ ಕೊಟ್ಟಿದ್ದ ರೂ.240/- ಹಣವನ್ನು ಆರೋಪಿಯಾದ ನಿಮ್ಮ ಬಳಿ ವಾಪಾಸು ಕೊಡುವಂತೆ ಕೇಳಿದ್ದಕ್ಕೆ, ಆರೋಪಿಯಾದ ನೀವು ಚಾಸಾ-1 ರವರಿಗೆ ಹಣ ಕೊಡುವುದಿಲ್ಲ ಅದೇನು ಮಾಡಿಕೊಳ್ಳುತ್ತೀಯಾ ಮಾಡಿಕೋ ಎಂದು ದಮ್ಕಿಹಾಕಿರುತ್ತೀರಿ. ಈ ಹಿನ್ನೆಲೆಯಲ್ಲಿ ಪುನಃ ಇದೇ ದಿನ ರಾತ್ರಿ 10.30 ಗಂಟೆಗೆ ಆರೋಪಿಯಾದ ನೀವು ಚಾಸಾ-1 ರವರಿಗೆ ಮರವಂಜಿ ಸರ್ಕಲ್ ಹತ್ತಿರವಿರುವ ಶ್ರೀ ವೆಂಕಟೇಶ್ವರ ಇಂಜಿನಿಯರಿಂಗ್ ವರ್ಕಶಾಪ್ ಹತ್ತಿರ ಕರೆಸಿ ಹಣದ ವಿಚಾರದಲ್ಲಿ ಜಗಳ ತೆಗೆದು ಚಾಸಾ-1 ರವರಿಗೆ ಸೂಳೇಮಗನೇ ಎಂದು ಅವಾಚ್ಯ ಶಬ್ದಗಳಿಂದ ನಿಂದಿಸಿ, ಸಾರ್ವಜನಿಕ ಶಾಂತಿಭಂಗವನ್ನುಂಟು ಮಾಡಿ ಭಾರತೀಯ ದಂಡ ಸಂಹಿತೆ ಕಲಂ 504 ಸಹ ಕಲಂ 34 ರ ರೀತ್ಯಾ ಅಪರಾಧವನ್ನು ನನ್ನ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಎರಡನೇಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ, ಸ್ಥಳ ಹಾಗೂ ಸಂದರ್ಭಗಳಂದು ಆರೋಪಿಯಾದ ನೀವು ಕಲ್ಲಿನಿಂದ ಬಿಸಿ ಹೊಡೆದಾಗ ಸದರಿ ಕಲ್ಲು ಚಾಸಾ-1 ಪ್ರಸನ್ನಕುಮಾರ ರವರ ಮೂಗಿಗೆ ಹಾಗೂ ಮೇಲಿನ ತುಟಿಗೆ ತಾಗಿ ಮೂಗಿಗೆ ಸಾಮಾನ್ಯ ಸ್ವರೂಪದ ಗಾಯವನ್ನುಂಟು ಮಾಡಿರುತ್ತೀರಿ. ಆದ್ದರಿಂದ ನೀವು ಭಾರತೀಯ ದಂಡ ಸಂಹಿತೆ ಕಲಂ 324 ರ ರೀತ್ಯಾ ಅಪರಾಧವನ್ನು ನನ್ನ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಮೂರನೇಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ, ಸ್ಥಳ ಹಾಗೂ ಸಂದರ್ಭಗಳಂದು ಆರೋಪಿಯಾದ ನೀವು ಕಲ್ಲಿನಿಂದ ಬಿಸಿ ಹೊಡೆದಾಗ ಸದರಿ ಕಲ್ಲು ಚಾಸಾ-1 ಪ್ರಸನ್ನಕುಮಾರ ರವರ ಮೂಗಿಗೆ ಹಾಗೂ ಮೇಲಿನ ತುಟಿಗೆ ತಾಗಿ ಮೂಗಿಗೆ ತೀವ್ರ ಸ್ವರೂಪದ ಗಾಯವನ್ನುಂಟು ಮಾಡಿರುತ್ತೀರಿ. ಆದ್ದರಿಂದ ನೀವು ಭಾರತೀಯ ದಂಡ ಸಂಹಿತೆ ಕಲಂ 326 ರ ರೀತ್ಯಾ ಅಪರಾಧವನ್ನು ನನ್ನ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಕೊನೆಯದಾಗಿ , ಮೇಲೆ ಹೇಳಿದ ದಿನಾಂಕ, ಸಮಯ, ಸ್ಥಳ ಹಾಗೂ ಸಂದರ್ಭಗಳಂದು ಆರೋಪಿಯಾದ ನೀವು ಚಾಸಾ-1 ರವರಿಗೆ ನಿನ್ನನ್ನು ಇಷ್ಟಕ್ಕೆ ಬಿಡುವುದಿಲ್ಲ ನಿನಗೆ ಒಂದು ಗತಿ ಕಾಣಿಸುವುದಾಗಿ ಪ್ರಾಣ ಬೆದರಿಕೆ ಹಾಕಿ, ಭಾರತೀಯ ದಂಡ ಸಂಹಿತೆ ಕಲಂ 506 ರ ರೀತ್ಯಾ ಅಪರಾಧವನ್ನು ನನ್ನ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಈ ಆರೋಪಗಳ ಮೇಲೆ ನೀವು ಈ ನ್ಯಾಯಾಲಯದ ಆರೋಪ ವಿಚಾರಣೆಗೆ ಗುರಿಯಾಗತಕ್ಕದೆಂದು ನಾನು ಈ ಮೂಲಕ ನಿರ್ದೇಶಿಸುತ್ತೇನೆ.

1. ನಿಮಗೆ ಈಗ ಓದಿ ಹೇಳಿದ ಆರೋಪವು ತಿಳಿಯಿತೆ?

ಉಃ

2. ನಿಮ್ಮ ಮೇಲೆ ಇರುವ ಆರೋಪವನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆ ಆಗಬೇಕೆ?

ಉಃ

**ಈ ಆರೋಪಗಳ ಮೇಲೆ ನೀವು ಈ ನ್ಯಾಯಾಲಯದ ಆರೋಪ ವಿಚಾರಣೆಗೆ ಗುರಿಯಾಗತಕ್ಕದೆಂದು ನಾನು ಈ ಮೂಲಕ ನಿರ್ದೇಶಿಸುತ್ತೇನೆ.**

ದಿನಾಂಕಃ 4 ನೇ ದಿವಸ ಜನವರಿ ಮಾಹೆ 2024 ನೇ ಇಸವಿ.

-ಸಹಿ-

(ಎಂ.ಎನ್.ರಾಮ್ ಪ್ರಶಾಂತ್),
ಪ್ರಧಾನ ಪ್ರದನ್ಯಾದಂ ಕಡೂರು.